# ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು-01

ಸಂಖ್ಯೆ: ಅ(1)ವೈ.ಪ.01/2010-11 ದಿನಾಂಕ: 19-08-2011

## ಸುತ್ತೋಲೆ

ವಿಷಯ: ಶಿಕ್ಷಣ ಇಲಾಖೆಯ ಸಿಬ್ಬಂದಿಗೆ ವೈದ್ಯಕೀಯ ವೆಚ್ಚ ಮರುಪಾವತಿ ಮತ್ತು ಮುಂಗಡ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:1. Karnataka Govt Servants (Medical Attendance) Rules 1963.

2. ಆಯುಕ್ತಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರ ಪತ್ರ ಸಂಖ್ಯೆ: ಎಂಡಿಎ/ಸನಿ(ವೈ) 41/09-10, ದಿನಾಂಕ: 17.03.2010.

3. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಸಿಎಂಎ/ವೈ.ಬಿ/01/2005-06, ದಿನಾಂಕ: 30.09.2005.

*****************

Karnataka Govt Servants (Medical Attendance) Rules 1963 ನಿಯಮ 3ಬಿ(II) ಹಾಗೂ 3ಬಿ(III) ರನ್ವಯ ಇಲಾಖಾ ಮುಖ್ಯಸ್ಥರು ಹಾಗೂ ಪ್ರವಾಸ ಭತ್ಯೆ ಬಿಲ್ಲಗಳನ್ನು ಮೇಲು ಸಹಿ ಮಾಡುವ ಅಧಿಕಾರಿಯು ಸಂಬಂಧಿಸಿದ ಇಲಾಖೆಯ ಸರ್ಕಾರಿ ನೌಕರರ ವೈದ್ಯಕೀಯ ವೆಚ್ಚದ ಮರುಪಾವತಿ ಕ್ಲೇಮ್ ಇತ್ಯರ್ಥ ಪಡಿಸುವ ನಿಯಂತ್ರಣಾಧಿಕಾರಿಗಳಾಗಿರುತ್ತಾರೆ. ಕರ್ನಾಟಕ ನಾಗರೀಕ ಸೇವಾ ನಿಯಮ ಅಪೆಂಡಿಕ್ಸ್ I [ನಿಯಮ 8(21)] ರ II ಇತರೆ ಕ್ರ.ಸಂ 3 ರಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ಅವರ ವ್ಯಾಪ್ತಿಗೆ ಬರುವ ಇಲಾಖೆಗಳ ಮುಖ್ಯಸ್ಥರಾಗಿರುತ್ತಾರೆ. ಉಪನಿರ್ದೇಶಕರು(ಆಡಳಿತ) ಇವರು ಪ್ರವಾಸ ಭತ್ಯೆ ಬಿಲ್ಲಗಳನ್ನು ಮೇಲು ಸಹಿ ಮಾಡುವ ಅಧಿಕಾರ ಹೊಂದಿರುತ್ತಾರೆ.

ಆಯುಕ್ತಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರ ಉಲ್ಲೇಖ (2) ರ ಸುತ್ತೋಲೆಯಲ್ಲಿ ಸಿಜಿಹೆಚ್ಎಸ್ ದರ ಹಾಗೂ ನಿಯಮಗಳನ್ವಯ ಆಯಾ ಇಲಾಖೆಯ ನೌಕರರ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ಆಯಾ ಇಲಾಖೆಯ ಹಂತದಲ್ಲಿ ಪರಿಶೀಲಿಸಿ ಅವರೇ ಮರುಪಾವತಿಯ ಬಗ್ಗೆ ಕ್ರಮ ತೆಗೆದುಕೊಳ್ಳಬೇಕು ಎಂದು ತಿಳಿಸಿದೆ. ಯಾವುದೇ ಬಿಲ್ಲಿನ ಅರ್ಹತಾ ಮೌಲ್ಯ ನಿರ್ಧರಿಸುವಲ್ಲಿ ಸಂಶಯ ಉಂಟಾದಲ್ಲಿ ಆಯಾ ಜಿಲ್ಲೆಯ ಶಸ್ತ್ರಚಿಕಿತ್ಸಕರಿಂದ ಅಭಿಪ್ರಾಯ ಪಡೆದು ಮರುಪಾವತಿ ಬಗ್ಗೆ ಕ್ರಮ ಕೈಗೊಳ್ಳುವುದು ಎಂದು ತಿಳಿಸಿದೆ.

ಉಲ್ಲೇಖ(3) ರ ಈ ಕಛೇರಿಯ ಸುತ್ತೋಲೆಯಲ್ಲಿ ಶಾಲಾ ಮುಖ್ಯ ವೈದ್ಯಕೀಯ ಪರಿವೀಕ್ಷಕರು ನೀಡುತ್ತಿದ್ದ ಅಭಿಪ್ರಾಯದ ಕೆಲಸವನ್ನು ದಿನಾಂಕ: 01.02.2005 ರಿಂದ ಜಾರಿಗೆ ಬರುವಂತೆ ವಿಕೇಂದ್ರೀಕರಿಸಿರುವುದರಿಂದ ಆಯಾ ಜಿಲ್ಲಾ ಪಂಚಾಯತ್ ಹಂತದಲ್ಲೇ ವೈದ್ಯಕೀಯ ಮರುಪಾವತಿ ಬಿಲ್ಲುಗಳನ್ನು ಅನುಮೋದಿಸಿ ಕ್ರಮಕೈಗೊಳ್ಳುವಂತೆ ಆದೇಶಿಸಲಾಗಿದೆ.

ಈ ಕಛೇರಿಯ ಉಲ್ಲೇಖ (4) ರ ಸುತ್ತೋಲೆಯಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವೈದ್ಯಕೀಯ ಮುಂಗಡ ಮಂಜೂರು ಮಾಡುವ ಬಗ್ಗೆ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿಗಳ ಹಂತದಲ್ಲಿ ಪರಿಶೀಲಿಸಿ

ಕ್ರಮವಹಿಸಲು ತಿಳಿಸಲಾಗಿದೆ. ಅದರಂತೆ ಕೆಲವು ಜಿಲ್ಲೆಗಳಲ್ಲಿ ಜಿಲ್ಲಾ ಹಂತದಲ್ಲಿ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ಸಿಜಿಹೆಚ್‌ಎಸ್ ದರ ಹಾಗೂ ನಿಯಮಾವಳಿಗಳನ್ವಯ ಜಿಲ್ಲಾ ಹಂತದಲ್ಲಿ ಇತ್ಯರ್ಥಪಡಿಸಲಾಗುತ್ತಿದೆ.

ಆದರೆ, ಕೆಲವು ಜಿಲ್ಲೆಗಳಿಂದ ಅನಗತ್ಯವಾಗಿ ವೈದ್ಯಕೀಯ ಬಿಲ್ಲುಗಳ ಅರ್ಹ ಮೊತ್ತದ ಬಗ್ಗೆ ಅಭಿಪ್ರಾಯಕ್ಕಾಗಿ ಮುಖ್ಯ ವೈದ್ಯಕೀಯ ಪರಿವೀಕ್ಷಕರು (ಸಿಎಂಐ) ಆಯುಕ್ತರ ಕಛೇರಿ, ಬೆಂಗಳೂರು, ಇವರಿಗೆ ಕಳುಹಿಸಿ ಅಭಿಪ್ರಾಯ ಪಡೆದ ನಂತರ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ಇತ್ಯರ್ಥಪಡಿಸುತ್ತಿರುವುದು ಗಮನಿಸಲಾಗಿದೆ. ಇದರಿಂದಾಗಿ ನೌಕರರ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ಇತ್ಯರ್ಥ ಪಡಿಸಲು ಅನಗತ್ಯ ವಿಳಂಬವಾಗಿ, ನಿಗದಿತ ಕಾಲದಲ್ಲಿ ನೌಕರರಿಗೆ ಅಗತ್ಯ ಸೌಲಭ್ಯವನ್ನು ಒದಗಿಸಿದಂತಾಗುವುದಿಲ್ಲ.

ಈ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ಹಾಗೂ ಉಪನಿರ್ದೇಶಕರು ದತ್ತವಾಗಿರುವ ಆರ್ಥಿಕ ಅಧಿಕಾರದ ಮಿತಿಯಲ್ಲಿ ಶಿಕ್ಷಣ ಇಲಾಖೆಯ ಸರ್ಕಾರಿ ನೌಕರರು ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಅಧಿಸೂಚಿತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ವೆಚ್ಚಕ್ಕೆ ಸಂಬಂಧಿಸಿದಂತೆ, ವೈದ್ಯಕೀಯ ಮುಂಗಡ ಹಾಗೂ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ಸಿಜಿಹೆಚ್‌ಎಸ್ ದರ ಹಾಗೂ ನಿಯಮಾವಳಿಗಳನ್ವಯ ಇತ್ಯರ್ಥ ಪಡಿಸಲು ಸೂಚಿಸಿದೆ.

ಇದೇ ರೀತಿಯಲ್ಲಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಿಂದ ಹೊರಗಿರುವ ಸಿಬ್ಬಂದಿ ವರ್ಗದವರ ವೈದ್ಯಕೀಯ ಮುಂಗಡ ಹಾಗೂ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ಸಂಬಂಧಿಸಿದ ನಿಯಂತ್ರಣಾಧಿಕಾರಿಗಳು ಉಲ್ಲೇಖಿತ ಆದೇಶಗಳ ಅನುಸಾರ ಸಿಜಿಹೆಚ್‌ಎಸ್ ದರ ಹಾಗೂ ನಿಯಮಾವಳಿಗಳನ್ವಯ ಇತ್ಯರ್ಥ ಪಡಿಸಲು ಸೂಚಿಸಿದೆ.

23.3.11

(ತುಷಾರ್ ಗಿರಿ ನಾಥ್)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು.
2. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ,
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.

ಪ್ರತಿಯನ್ನು ಮಾಹಿತಿಗಾಗಿ.

1. ಆಯುಕ್ತರು, ಆಯುಕ್ತಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು,
2. ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು-1.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಗುಲ್ಬರ್ಗಾ/ ಧಾರವಾಡ,
5. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
6. ರಾಜ್ಯದ ಎಲ್ಲಾ ವಿಭಾಗೀಯ ಸಹನಿರ್ದೇಶಕರುಗಳಿಗೆ.
7. ಸಹನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು-1.

\\3-server\Typing3\E\EST4\Mamatha\KCSR-MEDICAL.doc